**ಮಾನ್ಯ ಸಿವಿಲ್ ನ್ಯಾಯಾಧೀಶರು ವ ಜೆ ಎಂ ಎಫ್‌ಸಿ ಮುದ್ದೇಬಿಹಾಳ, ಇವರ ನ್ಯಾಯಾಲಯ**

ಸಿ ಸಿ ನಂಃ 702/2017
ಸಿಡಬ್ಲೂ-18
ಪಿ.ಡಬ್ಲ್ಯೂ-13

| | | |
|---|---|---|
| ಸಾಕ್ಷಿದಾರನ ಹೆಸರು | ಃ | ರವಿಕುಮಾರ ಕಪ್ಪತ್ತನವರ |
| ತಂದೆಯ ಹೆಸರು | ಃ | ಶಿವಲಿಂಗಪ್ಪ |
| ವಯಸ್ಸು | ಃ | 43 ವರ್ಷ, |
| ಉದ್ಯೋಗ | : | ಸಿ.ಪಿ.ಐ ನವಲಗುಂದ ವೃತ್ತ |
| ವಾಸಸ್ಥಳ | ಃ | ಧಾರವಾಡ ಜಿಲ್ಲೆ |

(ದಿಃ21/03/2024 ರಂದು ಸಾಕ್ಷಿಯನ್ನು ಕರೆಸಿ ಸತ್ಯ ಪ್ರತಿಜ್ಞೆ ಮಾಡಿಸಲಾಯಿತು)

**ಮುಖ್ಯ ವಿಚಾರಣೆ ಸ ಸ ಅ ಅವರಿಂದ**

2017 ಜುಲೈ ದಿಂದ 2019 ಸಪ್ಟೆಂಬರ್ ವರೆಗೆ ಸಿಪಿಐ ಎಂದು ಮುದ್ದೇಬಿಹಾಳ ವೃತ್ತದಲ್ಲಿ ಕಾರ್ಯ ನಿರ್ವಹಿಸಿರುತ್ತೇನೆ.

ದಿಃ 31/07/2017 ರಂದು ಪ್ರಕರಣದ ಕಡತವನ್ನು ಚಾಸಾ 17 ರವರ ಕಡೆಯಿಂದ ಸ್ವೀಕರಿಸಿರುತ್ತೇನೆ. ದಿಃ 15/08/2017 ರಂದು ಚಾಸಾ 13 ರವರಿಗೆ ಮೃತನ ಪಿ ಎಂ ವರದಿ ಸಲ್ಲಿಸಲು ಪತ್ರ ಬರೆದಿರುತ್ತೇನೆ. ದಿಃ 27/09/2017 ರಂದು ಮೃತನ ಪಿ ಎಂ ವರದಿಯನ್ನು ಸ್ವೀಕರಿಸಿರುತ್ತೇನೆ. ಸಾಕ್ಷಿಯೂ ಪಿ ಎಂ ವರದಿಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-12 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-12(ಬಿ) ಎಂದು ಗುರುತಿಸಲಾಯಿತು. ಆರೋಪಿತನ ವಿರುದ್ದ ಸಾಕಷ್ಟು ಸಾಕ್ಷ್ಯಾಧಾರಗಳು ಇರುವುದರಿಂದ, ಆರೋಪಿತನ ವಿರುದ್ದ ಮಾನ್ಯ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ.

**<u>ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಆರ್ ವಾಯ್ ಎನ್ ವಕೀಲರಿಂದ</u>**

1) ನಮೂನೆ ನಂಃ 146(2) ರಲ್ಲಿ ಮೃತನ ಅಡ್ಡ ಹೆಸರು ಮತ್ತು ನಿಪಿ-12 ರ್ಲಿ ಮೃತನ ಅಡ್ಡ ಹೆಸರು ಬೇರೆ ಬೇರೆ ಆಗಿರುತ್ತದೆ ಎಂದರೆ ಸರಿ. ಈ ಪ್ರಕರಣದಲ್ಲಿ ನಾನು ಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದುಕೊಳ್ಳಲಾರದ ಕಾರಣ, ಆರೋಪಿತನ ವಿರುದ್ದ ಸಾಕಷ್ಟು ಸಾಕ್ಷ್ಯಾಧಾರಗಳು ಕಂಡು ಬಂದಿರುತ್ತವೆ ಎಂದು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ16 ಮತ್ತು 17 ರವರ ತನಿಖೆಗೆ ಯಾವುದೇ ಚ್ಯುತಿ ಬರಬಾರದೆನ್ನುವ ಉದ್ದೇಶದಿಂದ ಸುಳ್ಳು ವರದಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತನಿಗೂ ಮತ್ತು ಅಪಘಾತಕ್ಕೂ ಯಾವುದೇ ಸಂಬಂಧ ಇರದೇ ಇದ್ದರೂ ಸಹಿತ ಆರೋಪಿತನ ವಿರುದ್ದ ಸುಳ್ಳು ಅಂತಿಮ ವರದಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ದೂರುದಾರರಿಗೆ ಪರಿಹಾರ ಧನ ಸಿಗಲು ಅನುಕೂಲ ಮಾಡಿಕೊಡುವ ಉದ್ದೇಶದಿಂದ ನಿಪಿ-12 ರಂತೆ ಸುಳ್ಳು ದಾಖಲೆ ಸೃಷ್ಟಿಸಿ ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಠಾಣಾ ಅಂಕಿ ಸಂಖ್ಯೆ ಗೋಸ್ಕರ ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಓ ಹೇ ಕೇ ಸರಿ ಅದೆ.

ನ್ಯಾದಂ ಪ್ರ ವರ್ಗ, ಮುದ್ದೇಬಿಹಾಳ.